# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ
ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)ಪಿ.ಆರ್/ 87 /2021-22. ದಿನಾಂಕ :23-06-21

ದಿನಾಂಕ: 19-06-2021 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ವೆನಕೇಶ್ ಆರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು 143 | 9480684415 |
| 3 | ಪಿ. ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 9449153115 |
| 4 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 5 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 6 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |

ದಿನಾಂಕ:-19-06-2021ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ಎಸ್.ವೆಂಕಟೇಶ್ ರವರು ಮಾತನಾಡಿ ಸಜ್ಜನ್‌ರಾವ್ ವೃತ್ತದ ಬಳಿ ಇರುವ ಐಲ್ಯಾಂಡ್‌ನಲ್ಲಿ ಕೆಲವರು ಪಾರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕುತ್ತಿರುತ್ತಾರೆ. ಇದರಿಂದಾಗಿ ವಿಪರೀತ ಪಾರಿವಾಳಗಳು ಜಮಾವಣೆಯಾಗುವುದರಿಂದ ಈ ಪ್ರದೇಶದಲ್ಲಿ ಓಡಾಡುವ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುತ್ತದಲ್ಲದೆ ಇದರಿಂದಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮಗಳು ಉಂಟಾಗುವ ಸಂಭವವಿರುತ್ತದೆಂದು ತಿಳಿಸಿ ಸದರಿ ಜಾಗದಲ್ಲಿ ಪಾರಿವಾಳಗಳಿಗೆ ಆಹಾರ ಧಾನ್ಯ ಹಾಕುವವರ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಇದನ್ನು

Scanned by CamScanner

ತಪ್ಪಿಸಬೇಕೆಂದು ಸಭೆಗೆ ತಿಳಿಸಿದರು. ಸದರಿ ವಿಚಾರವಾಗಿ ಚರ್ಚಿಸಲಾಗಿ ಸಜ್ಜನರಾವ್ ವೃತ್ತದಲ್ಲಿರುವ ಐಲ್ಯಾಂಡ್‌ನಲ್ಲಿ ಖಾಲಿ ಜಾಗವಿರುವುದರಿಂದ ಪಾರಿವಾಳಗಳಿಗೆ ಆಹಾರ ಧಾನ್ಯವನ್ನು ಹಾಕುತ್ತಿದ್ದು, ಈ ಜಾಗದಲ್ಲಿ ಹೂವಿನ ಗಿಡಗಳು ಮತ್ತು ಅಲಂಕಾರಿಕ ಗಿಡಗಳನ್ನು ನಡೆವ ಮೂಲಕ ಇಲ್ಲಿ ಪಾರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕಲು ಜಾಗವಿಲ್ಲದಂತೆ ಮಾಡಿದರೆ ಇದನ್ನು ತಪ್ಪಿಸಬಹುದು ಎಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು. ಈ ಜಾಗದಲ್ಲಿ ಹೂವಿನ ಗಿಡಗಳು ಮತ್ತು ಅಲಂಕಾರಿಕ ಗಿಡಗಳನ್ನು ನೆಡಲು ತೋಟಗಾರಿಕೆ ಅಧೀಕ್ಷರಿಗೆ ಸೂಕ್ತ ಕ್ರಮ ವಹಿಸಲು ಕೋರಲಾಗುವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ರಾಜು ರವರು ಮಾತನಾಡಿ ಈ ಹಿಂದಿನ ಸಭೆಗಳಲ್ಲಿ ಪ್ರಸ್ತಾಪಿಸಲಾಗಿದ್ದ ವಿಷಯವಾದ ಸರ್ವೇಯರ್ ರಸ್ತೆ ಕನ್ಸರ್‌ವೆನ್ಸಿ ರಸ್ತೆಯಲ್ಲಿರುವ ಅಂಬಾ ಭವಾನಿ ಮಾಂಸಾಹಾರಿ ಹೋಟೆಲ್ ಅನ್ನು ತೆರವುಗೊಳಿಸುವ ವಿಚಾರವನ್ನು ಪುನಃ ಪ್ರಸ್ತಾಪಿಸಿರರು, ಈ ಬಗ್ಗೆ ಕೂಡಲೇ ಕ್ರಮ ವಹಿಸಲು ಚಿಕ್ಕಪೇಟೆ ವಿಭಾಗದ ಆರೋಗ್ಯವೈದ್ಯಾಧಿಕಾರಿ ರವರನ್ನು ಕೋರಲಾಗುವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ರಾಜು ರವರು ಪುನಃ ಮಾತನಾಡಿ ಕೆ.ಆರ್.ರಸ್ತೆ ಹಾಗೂ ಹೆಚ್.ಬಿ.ಸಮಾಜ ರಸ್ತೆಯ ಜಂಕ್ಷನ್‌ನಲ್ಲಿರುವ ಹೂವಿನ ಕುಂಡಗಳ ಮಾರಾಟ ಅಂಗಡಿಯನ್ನು ತೆರವುಗೊಳಿಸಲು ಈ ಹಿಂದಿನ ಸಭೆಗಳಲ್ಲಿ ಕೋರಿದ್ದ ವಿಚಾರವನ್ನು ಪುನಃ ಪ್ರಸ್ತಾಪಿಸಿ ಈ ಬಗ್ಗೆ ಕ್ರಮಕೈಗೊಳ್ಳಬೇಕೆಂದು ಕೋರಿದರು. ಈ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡಿ ಒಂದು ದಿನಾಂಕವನ್ನು ಗೊತ್ತುಪಡಿಸಿ ಪೋಲೀಸರ ನೆರವಿನೊಂದಿಗೆ ಸದರಿ ಹೂ ಕಂಡಗಳ ಮಾರಾಟದ ಅಂಗಡಿಯನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ಅಭಿಯಂತರರಿಗೆ ತಿಳಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ರಾಜು ರವರು ಪುನಃ ಮಾತನಾಡಿ ಎಂ.ಎನ್.ಕೃಷ್ಣರಾವ್ ರಸ್ತೆ ಮತ್ತು ಹೆಚ್.ಬಿ.ಸಮಾಜ ರಸ್ತೆಗಳ ಜಂಕ್ಷನ್‌ನಲ್ಲಿ ಎಳನೀರು ಮಾರುವ ಅಂಗಡಿಯಿದ್ದು ಇದರಿಂದಾಗಿ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದಾಗಿ ತಿಳಿಸಿ ಇದನ್ನು ತೆರವುಗೊಳಿಸಬೇಕೆಂದು ಸಭೆಗೆ ತಿಳಿಸಿದರು. ಸದರಿ ಅಂಗಡಿಯನ್ನು ಕೂಡಲೇ ತೆರವುಗೊಳಿಸಲು ಕ್ರಮಕೈಗೊಳ್ಳುವಂತೆ ವಾರ್ಡಿನ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ತಿಳಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

23/6/2021.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ –143 ವಿ. ವಿ.ಪುರಂ

23/6/2021

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)

Scanned by CamScanner